ಫ್ರೀಡಂ ನ್ಯೂಸ್

# ಮೈಸೂರು ಪಾಲಿಕೆಯಿಂದಲೇ ಫುಟ್‌ಪಾತ್ ಒತ್ತುವರಿ ಹಗರಣ!



**ಮೈಸೂರು:** ಸಾಂಸ್ಕೃತಿಕ ಹಾಗೂ ಪಾರಂಪರಿಕ ನಗರಿ ಮೈಸೂರಿನಲ್ಲಿ ಈಗ 'ಫುಟ್‌ಪಾತ್ ರಾಜಕೀಯ' ತಾರಕಕ್ಕೇರಿದೆ. ಸಾರ್ವಜನಿಕರು ಮತ್ತು ಪ್ರವಾಸಿಗರು ನಿಶ್ಚಿಂತೆಯಿಂದ ಓಡಾಡಬೇಕಾದ ಜಾಗದಲ್ಲಿ ಟಾಂಗಾ ಸ್ಟ್ಯಾಂಡ್ ನಿರ್ಮಿಸಲು ಮುಂದಾಗಿರುವ ಪಾಲಿಕೆಯ ಕ್ರಮವು ಮೈಸೂರಿಗರ ಕೆಂಡಾಮಂಡಲಕ್ಕೆ ಕಾರಣವಾಗಿದೆ. 'ಸ್ವದೇಶ್ ದರ್ಶನ 2.0' ಯೋಜನೆಯ ಹೆಸರಿನಲ್ಲಿ ನಗರದ 10 ಪ್ರಮುಖ ಕೇಂದ್ರಗಳಲ್ಲಿ ಟಾಂಗಾ ನಿಲ್ದಾಣಗಳನ್ನು ನಿರ್ಮಿಸುವ ಪಾಲಿಕೆಯ ಹಠಾತ್ ನಿರ್ಧಾರವೀಗ ದೊಡ್ಡ ವಿವಾದವಾಗಿ ಮಾರ್ಪಟ್ಟಿದೆ. ವಿಶೇಷವಾಗಿ ಅರಮನೆಯ ಮುಂಭಾಗದ ಚಾಮರಾಜೇಂದ್ರ ವೃತ್ತದ ಬಳಿ, ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿದ್ದ ಪಾರಂಪರಿಕ ರಾಜಮಾರ್ಗವನ್ನು ಯಂತ್ರಗಳ ಮೂಲಕ ಒಡೆದು ಹಾಕಿರುವುದು ಸಾರ್ವಜನಿಕರ ಆಕ್ರೋಶಕ್ಕೆ ತುಪ್ಪ ಸುರಿದಂತಾಗಿದೆ.

ಈ ಅವೈಜ್ಞಾನಿಕ ಕಾಮಗಾರಿಯ ವಿರುದ್ಧ ಬಿಜೆಪಿ ನಾಯಕ ಪ್ರತಾಪ್ ಸಿಂಹ ಅವರು ಅತ್ಯಂತ ಕಠಿಣ ಶಬ್ದಗಳಿಂದ ಪಾಲಿಕೆ ಆಯುಕ್ತರ ಮೇಲೆ ದಾಳಿ ನಡೆಸಿದ್ದಾರೆ. "ಪಾಲಿಕೆ ಆಯುಕ್ತರಿಗೆ ಮೈಸೂರು ನಗರದ ವಾಸ್ತವವೇ ಗೊತ್ತಿಲ್ಲ. ಕೇವಲ ಎಸಿ ಕಚೇರಿಯಲ್ಲಿ ಕುಳಿತು ಪಾದಚಾರಿ ಮಾರ್ಗ ಯಾವುದು ಮತ್ತು ಖಾಲಿ ಜಾಗ ಯಾವುದು ಎಂಬ ವ್ಯತ್ಯಾಸ ತಿಳಿಯದಂತೆ ಆಡಳಿತ ನಡೆಸುತ್ತಿದ್ದಾರೆ. ಮುಖ್ಯಮಂತ್ರಿಗಳು ಬಂದಾಗ ಹೂಗುಚ್ಛ ನೀಡುವುದಷ್ಟೇ ಇವರ ಕೆಲಸವಲ್ಲ, ಮೊದಲು ನಗರದ ರಸ್ತೆಗಿಳಿದು ಜನರ ಸಮಸ್ಯೆಗಳನ್ನು ಅರಿಯಲಿ" ಎಂದು ಅವರು ಕಿಡಿಕಾರಿದ್ದಾರೆ. ಅಲ್ಲದೆ, ತಕ್ಷಣವೇ ಈ ಧ್ವಂಸ ಕಾರ್ಯವನ್ನು ನಿಲ್ಲಿಸಿ, ಹಾಳಾದ ರಸ್ತೆಯನ್ನು ಮೊದಲಿನಂತೆ ಸರಿಪಡಿಸಬೇಕೆಂದು ಅವರು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ.

ಈ ವಿವಾದಕ್ಕೆ ಮತ್ತೊಂದು ಆಯಾಮವೆಂದರೆ ಪ್ರವಾಸಿಗರ ಸುರಕ್ಷತೆ. ದಿನನಿತ್ಯ ಸಾವಿರಾರು ಪ್ರವಾಸಿಗರು ಮತ್ತು ಸ್ಥಳೀಯರು ಸಂಚರಿಸುವ ಈ ಪಾರಂಪರಿಕ ಹಾದಿಯಲ್ಲಿ ಟಾಂಗಾ ಸ್ಟ್ಯಾಂಡ್ ತಲೆಯೆತ್ತಿದರೆ, ಪಾದಚಾರಿಗಳು ಅನಿವಾರ್ಯವಾಗಿ ವಾಹನಗಳು ಸಂಚರಿಸುವ ರಸ್ತೆಗೆ ಇಳಿಯಬೇಕಾಗುತ್ತದೆ. ಇದು ಪ್ರಾಣಾಪಾಯಕ್ಕೆ ಆಹ್ವಾನ ನೀಡಿದಂತಾಗುತ್ತದೆ ಎಂಬುದು ಸ್ಥಳೀಯರ ಆತಂಕವಾಗಿದೆ. ಮಾಜಿ ಮೇಯರ್ ಎಂ.ಜೆ. ರವಿಕುಮಾರ್ ಅವರು ಈ ಬಗ್ಗೆ ಮಾತನಾಡುತ್ತಾ, "ಪಾಲಿಕೆಯು ಮೈಸೂರನ್ನು ಶೆಲ್ಟರ್‌ಗಳ ನಗರವನ್ನಾಗಿ ಮಾಡಲು ಹೊರಟಿದೆ. ಒತ್ತುವರಿ ತೆರವು ಮಾಡಬೇಕಾದ ಸರ್ಕಾರಿ ಸಂಸ್ಥೆಯೇ ಸ್ವತಃ ಒತ್ತುವರಿ ಮಾಡುತ್ತಿರುವುದು ದೊಡ್ಡ ದುರಂತ" ಎಂದು ಆಕ್ರೋಶ ಹೊರಹಾಕಿದ್ದಾರೆ.

ದಸರಾ ಮೆರವಣಿಗೆ ಸಾಗುವ ಅತ್ಯಂತ ಪವಿತ್ರ ಮತ್ತು ಐತಿಹಾಸಿಕ ರಸ್ತೆಯನ್ನೇ ಒಡೆದು ಹಾಕಿರುವ ಈ ಕೃತ್ಯದ ಹಿಂದೆ ಅಧಿಕಾರಿಗಳ ಬೇಜವಾಬ್ದಾರಿತನ ಎದ್ದು ಕಾಣುತ್ತಿದೆ. ತಪ್ಪಿತಸ್ಥ ಅಧಿಕಾರಿಗಳನ್ನು ತಕ್ಷಣವೇ ಅಮಾನತು ಮಾಡಬೇಕು ಎಂಬ ಒತ್ತಾಯ ಮೈಸೂರಿನಾದ್ಯಂತ ಕೇಳಿಬರುತ್ತಿದೆ. ಸದ್ಯಕ್ಕೆ ಈ ಕಾಮಗಾರಿ ಸ್ಥಗಿತಗೊಂಡಿದೆಯಾದರೂ, ಪಾಲಿಕೆ ಅಧಿಕಾರಿಗಳು ಸಾರ್ವಜನಿಕರ ಆಕ್ರೋಶಕ್ಕೆ ಮಣಿದು ಪರ್ಯಾಯ ವ್ಯವಸ್ಥೆ ಮಾಡುತ್ತಾರೆಯೇ ಅಥವಾ ತಮ್ಮ ಮೊಂಡುತನ ಮುಂದುವರಿಸುತ್ತಾರೆಯೇ ಎಂಬುದನ್ನು ಇಡೀ ಮೈಸೂರು ಕುತೂಹಲದಿಂದ ಗಮನಿಸುತ್ತಿದೆ.

# ನಂದಿನಿ ಉತ್ಪನ್ನಗಳಿಗೂ ತಟ್ಟಿದ ಇರಾನ್-ಇಸ್ರೇಲ್ ಯುದ್ಧದ ಬಿಸಿ: ಯುಗಾದಿ ಹಬ್ಬದ ಹೊತ್ತಲ್ಲೇ ಕೆಎಂಎಫ್‌ಗೆ ಗ್ಯಾಸ್ ಸಂಕಷ್ಟ!




**ಬೆಂಗಳೂರು:** ಯುಗಾದಿ ಹಬ್ಬದ ಸಂಭ್ರಮದ ನಡುವೆಯೇ ಕನ್ನಡಿಗರ ಹೆಮ್ಮೆಯ ಬ್ರ್ಯಾಂಡ್ 'ನಂದಿನಿ' ಉತ್ಪನ್ನಗಳಿಗೆ ದೊಡ್ಡ ಸಂಕಷ್ಟ ಎದುರಾಗಿದೆ. ಇರಾನ್ ಮತ್ತು ಇಸ್ರೇಲ್ ನಡುವಿನ ಸೇನಾ ಸಂಘರ್ಷದ ಜಾಗತಿಕ ಪರಿಣಾಮವಾಗಿ ದೇಶಾದ್ಯಂತ ಕಮರ್ಷಿಯಲ್ ಎಲ್‌ಪಿಜಿ ಸಿಲಿಂಡರ್‌ಗಳ ಪೂರೈಕೆಯಲ್ಲಿ ಭಾರಿ ವ್ಯತ್ಯಯ ಉಂಟಾಗಿದ್ದು, ಇದು ನೇರವಾಗಿ ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳಿ (KMF) ಮೇಲೆ ಪರಿಣಾಮ ಬೀರಿದೆ. ಕಳೆದ ಕೆಲವು ದಿನಗಳಿಂದ ಸಿಲಿಂಡರ್ ಸರಬರಾಜು ಕುಂಠಿತಗೊಂಡಿರುವುದರಿಂದ ಕೆಎಂಎಫ್ ಉತ್ಪಾದನಾ ಘಟಕಗಳು ತೀವ್ರ ಒತ್ತಡಕ್ಕೆ ಸಿಲುಕಿವೆ.

ಸಾಮಾನ್ಯವಾಗಿ ಕೆಎಂಎಫ್ ತನ್ನ ವಿವಿಧ ಉತ್ಪನ್ನಗಳ ತಯಾರಿಕೆಗಾಗಿ ಪ್ರತಿ ತಿಂಗಳು ಸುಮಾರು 450 ಕಮರ್ಷಿಯಲ್ ಎಲ್‌ಪಿಜಿ ಸಿಲಿಂಡರ್‌ಗಳನ್ನು ಬಳಸುತ್ತದೆ. ಆದರೆ ಸದ್ಯದ ಪರಿಸ್ಥಿತಿಯಲ್ಲಿ ಅಗತ್ಯ ಪ್ರಮಾಣದ ಗ್ಯಾಸ್ ಲಭ್ಯವಾಗುತ್ತಿಲ್ಲ. ಅಧಿಕಾರಿಗಳ ಮಾಹಿತಿಯ ಪ್ರಕಾರ, ಪ್ರಸ್ತುತ ಲಭ್ಯವಿರುವ ಗ್ಯಾಸ್ ಸಂಗ್ರಹವು ಇನ್ನೆರಡು ದಿನಗಳಿಗೆ ಮಾತ್ರ ಸಾಕಾಗಲಿದ್ದು, ಮಾರ್ಚ್ 20ರ ಒಳಗಾಗಿ ಪೂರೈಕೆ ಪುನರಾರಂಭಗೊಳ್ಳದಿದ್ದರೆ ನಂದಿನಿ ಬ್ರ್ಯಾಂಡ್‌ನ ಸಿಹಿ ತಿಂಡಿಗಳು ಸೇರಿದಂತೆ ಹಲವು ಮೌಲ್ಯವರ್ಧಿತ ಉತ್ಪನ್ನಗಳ ತಯಾರಿಕೆ ಸ್ಥಗಿತಗೊಳ್ಳುವ ಭೀತಿ ಆವರಿಸಿದೆ. ಈ ತುರ್ತು ಪರಿಸ್ಥಿತಿಯನ್ನು ಮನಗಂಡಿರುವ ಕೆಎಂಎಫ್, ತಕ್ಷಣ ಮಧ್ಯಪ್ರವೇಶಿಸಿ ಗ್ಯಾಸ್ ಪೂರೈಕೆಗೆ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಮನವಿ ಮಾಡಿದೆ.

ದೇಶದ ಎರಡನೇ ಅತಿದೊಡ್ಡ ಹಾಲು ಸಹಕಾರ ಒಕ್ಕೂಟವಾಗಿರುವ ಕೆಎಂಎಫ್, ವಾರ್ಷಿಕ ಸುಮಾರು 25,000 ಕೋಟಿಯಿಂದ 30,000 ಕೋಟಿ ರೂಪಾಯಿಗಳ ಬೃಹತ್ ವಹಿವಾಟು ನಡೆಸುತ್ತಿದೆ. ದಿನವೊಂದಕ್ಕೆ ಸಂಗ್ರಹವಾಗುವ 90 ಲಕ್ಷ ಲೀಟರ್ ಹಾಲಿನಲ್ಲಿ ಅರ್ಧದಷ್ಟನ್ನು ಮೊಸರು, ತುಪ್ಪ, ಬೆಣ್ಣೆ ಮತ್ತು 140ಕ್ಕೂ ಹೆಚ್ಚು ವಿವಿಧ ಉತ್ಪನ್ನಗಳಾಗಿ ಪರಿವರ್ತಿಸಿ ಮಾರಾಟ ಮಾಡಲಾಗುತ್ತದೆ. ಯುಗಾದಿ ಹಬ್ಬದ ಸಮಯದಲ್ಲಿ ಈ ಉತ್ಪನ್ನಗಳಿಗೆ ಬೇಡಿಕೆ ಗಣನೀಯವಾಗಿ ಹೆಚ್ಚಾಗುವುದರಿಂದ, ಪ್ರಸ್ತುತ ಎದುರಾಗಿರುವ ಇಂಧನ ಅಭಾವವು ಹಬ್ಬದ ವ್ಯಾಪಾರದ ಮೇಲೆ ನೇರ ಪೆಟ್ಟು ನೀಡುವ ಆತಂಕ ಮೂಡಿಸಿದೆ. ಒಂದು ವೇಳೆ ಸಮಸ್ಯೆ ಬಗೆಹರಿಯದಿದ್ದರೆ, ಮುಂದಿನ ದಿನಗಳಲ್ಲಿ ನಂದಿನಿ ಉತ್ಪನ್ನಗಳನ್ನು ಸೀಮಿತ ಪ್ರಮಾಣದಲ್ಲಿ ಮಾತ್ರ ಉತ್ಪಾದಿಸುವ ಅನಿವಾರ್ಯತೆ ಎದುರಾಗಬಹುದು ಎಂದು ಸಂಸ್ಥೆ ತಿಳಿಸಿದೆ.






# ಬೆಂಗಳೂರು ಟ್ರಾಫಿಕ್‌ಗೆ ಡಿಕೆಶಿ ಮಾಸ್ಟರ್ ಪ್ಲಾನ್: ಚಾಮರಾಜಪೇಟೆ TO ಕೆಂಗೇರಿ 810 ಕೋಟಿ ರೂ. ವೆಚ್ಚದ ಮೇಲ್ಸೇತುವೆ ಯೋಜನೆ!

**ಬೆಂಗಳೂರು:** ಸಿಲಿಕಾನ್ ಸಿಟಿಯ ಟ್ರಾಫಿಕ್ ನರಕಕ್ಕೆ ಮುಕ್ತಿ ನೀಡಲು ರಾಜ್ಯ ಸರ್ಕಾರ ಭರ್ಜರಿ ಮಾಸ್ಟರ್ ಪ್ಲಾನ್ ರೂಪಿಸಿದೆ. ಮೈಸೂರು ರಸ್ತೆಯ ವಾಹನ ದಟ್ಟಣೆಯನ್ನು ನಿಯಂತ್ರಿಸಲು ಚಾಮರಾಜಪೇಟೆಯಿಂದ ಕೆಂಗೇರಿವರೆಗೆ ಬೃಹತ್ ಮೇಲ್ಸೇತುವೆ ನಿರ್ಮಿಸಲು ಸರ್ಕಾರ ಸಜ್ಜಾಗಿದೆ. ಈ ಮಹತ್ವಾಕಾಂಕ್ಷಿ ಯೋಜನೆಯ ಕುರಿತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಧಾನ ಪರಿಷತ್ತಿನಲ್ಲಿ ಮಹತ್ವದ ಮಾಹಿತಿ ಹಂಚಿಕೊಂಡಿದ್ದಾರೆ.

**810 ಕೋಟಿ ರೂಪಾಯಿಗಳ ಬೃಹತ್ ಯೋಜನೆ:** ಚಾಮರಾಜಪೇಟೆಯಿಂದ ಕೆಂಗೇರಿವರೆಗೆ ಸಂಚಾರ ಸುಗಮಗೊಳಿಸುವ ಉದ್ದೇಶದಿಂದ ಈ ಮೇಲ್ಸೇತುವೆ ವಿಸ್ತರಣೆ ಪ್ರಸ್ತಾವನೆಯನ್ನು ಸಿದ್ಧಪಡಿಸಲಾಗಿದೆ. ಭೂಸ್ವಾಧೀನ ಪ್ರಕ್ರಿಯೆ ಸೇರಿದಂತೆ ಈ ಯೋಜನೆಗೆ ಅಂದಾಜು 810 ಕೋಟಿ ರೂಪಾಯಿ ವೆಚ್ಚವಾಗಲಿದೆ ಎಂದು ಅಂದಾಜಿಸಲಾಗಿದೆ. ಪ್ರಸ್ತುತ ಈ ಯೋಜನೆಯ ಸವಿಸ್ತಾರ ಯೋಜನಾ ವರದಿ (DPR) ಸಿದ್ಧವಾಗಿದ್ದು, ಸರ್ಕಾರದ ಆಡಳಿತಾತ್ಮಕ ಅನುಮೋದನೆಗಾಗಿ ಪರಿಶೀಲನೆಯ ಹಂತದಲ್ಲಿದೆ.



**ಸಿರಸಿ ಜಂಕ್ಷನ್ ಟು ಕಿಮ್ಕೋ ವರೆಗೆ ವಿಸ್ತರಣೆ:** ಕಳೆದ ಎರಡು ವರ್ಷಗಳಿಂದ ಈ ಭಾಗದಲ್ಲಿ ವಾಹನ ದಟ್ಟಣೆ ಕಡಿಮೆ ಮಾಡಲು ಸರ್ಕಾರ ಹಲವು ಕಾರ್ಯಸಾಧ್ಯತಾ ವರದಿಗಳನ್ನು ಪರಿಶೀಲಿಸಿದೆ. ಅದರಂತೆ, ಪ್ರಸ್ತುತ ಇರುವ ಚಾಮರಾಜಪೇಟೆ ಸಿರಸಿ ಜಂಕ್ಷನ್ ಮೇಲ್ಸೇತುವೆಯನ್ನು ಬಿ.ಹೆಚ್.ಇ.ಎಲ್ ಕಿಮ್ಕೋ ಜಂಕ್ಷನ್‌ವರೆಗೂ ವಿಸ್ತರಿಸಲು ಗ್ರೀನ್ ಸಿಗ್ನಲ್ ನೀಡಲಾಗಿದೆ. ಇದು ಮೈಸೂರು ರಸ್ತೆಯಲ್ಲಿ ಸಂಚರಿಸುವ ಸಾವಿರಾರು ವಾಹನ ಸವಾರರಿಗೆ ದೊಡ್ಡ ಮಟ್ಟದ ರಿಲೀಫ್ ನೀಡಲಿದೆ.

**ಪ್ರಗತಿಯಲ್ಲಿರುವ ಇತರ ಕಾಮಗಾರಿಗಳು:** ನಾಯಂಡಹಳ್ಳಿ ಮೇಲ್ಸೇತುವೆ ದಾಟಿದ ನಂತರ ರಾಜರಾಜೇಶ್ವರಿನಗರ ಮುಖ್ಯರಸ್ತೆಯ ಕಮಾನು (Arch) ಭಾಗದಲ್ಲಿ ಈಗಾಗಲೇ ಮೇಲ್ಸೇತುವೆ ನಿರ್ಮಾಣ ಕಾಮಗಾರಿ ಭರದಿಂದ ಸಾಗುತ್ತಿದೆ. ಇದರ ಜೊತೆಗೆ ರಾಜರಾಜೇಶ್ವರಿನಗರ ಕಮಾನಿನಿಂದ ಕೆಂಗೇರಿವರೆಗಿನ ರಸ್ತೆಗೆ 75 ಕೋಟಿ ರೂಪಾಯಿ ವೆಚ್ಚದಲ್ಲಿ ಕೈಗೊಳ್ಳಲಾದ ಡಾಂಬರೀಕರಣ ಯೋಜನೆ ಕೂಡ ಪೂರ್ಣಗೊಳ್ಳುವ ಹಂತಕ್ಕೆ ತಲುಪಿದೆ.

ಸುರಂಗ ರಸ್ತೆ ಪ್ರಸ್ತಾವನೆ ಇಲ್ಲ: ಮೈಸೂರು ರಸ್ತೆಗೆ ಪರ್ಯಾಯವಾಗಿ ಸುರಂಗ ರಸ್ತೆ ಅಥವಾ ರಾಜಕಾಲುವೆ ಪಕ್ಕದಲ್ಲಿ ರಸ್ತೆ ನಿರ್ಮಿಸುವ ಯಾವುದೇ ವಿಶೇಷ ಕ್ರಿಯಾಯೋಜನೆ ಸದ್ಯಕ್ಕೆ ಸರ್ಕಾರದ ಮುಂದಿಲ್ಲ ಎಂದು ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಸದ್ಯಕ್ಕೆ ಮೇಲ್ಸೇತುವೆ ವಿಸ್ತರಣೆ ಮತ್ತು ರಸ್ತೆ ಅಭಿವೃದ್ಧಿಗೇ ಸರ್ಕಾರ ಆದ್ಯತೆ ನೀಡಿದೆ. ಒಟ್ಟಿನಲ್ಲಿ ಈ ಯೋಜನೆ ಜಾರಿಗೆ ಬಂದರೆ ಕೆಂಗೇರಿ ಭಾಗದ ಜನರಿಗೆ ಟ್ರಾಫಿಕ್ ಕಿರಿಕಿರಿ ಇಲ್ಲದೆ ಬೆಂಗಳೂರು ನಗರ ಪ್ರವೇಶಿಸಲು ಹಾದಿ ಸುಗಮವಾಗಲಿದೆ.

# ರಾಜ್ಯಾದ್ಯಂತ ವರುಣನ ಆರ್ಭಟ:

## ಬೆಂಗಳೂರು ಹೈರಾಣ, ಮಾರ್ಚ್ 21ರವರೆಗೆ ಆಲಿಕಲ್ಲು ಮಳೆ ಸಾಧ್ಯತೆ!



**ಬೆಂಗಳೂರು:** ದೀರ್ಘಕಾಲದ ರಣ ಬಿಸಿಲಿನಿಂದ ಕಂಗಾಲಾಗಿದ್ದ ರಾಜ್ಯದ ಜನತೆಗೆ ವರುಣದೇವ ತಂಪೆರೆದಿದ್ದಾನೆ. ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮಂಗಳವಾರ ಆಲಿಕಲ್ಲು ಸಹಿತ ಭಾರಿ ಮಳೆ ಸುರಿದಿದ್ದು, ಬಿಸಿಲಿನ ಬೇಗೆಯಿಂದ ಜನ ಮುಕ್ತಿ ಪಡೆದಿದ್ದಾರೆ. ಆದರೆ, ವರ್ಷದ ಮೊದಲ ಮಳೆಗೇ ರಾಜಧಾನಿ ಬೆಂಗಳೂರು ಹೈರಾಣಾಗಿದ್ದು, ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಮಾರ್ಚ್ 21ರವರೆಗೂ ರಾಜ್ಯದ ಹಲವೆಡೆ ಗುಡುಗು ಸಹಿತ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ.

ಜಮ್ಮು-ಕಾಶ್ಮೀರದಂತಾದ ದಾವಣಗೆರೆ; ಮೈಸೂರಿನಲ್ಲಿ ವರ್ಷದ ಮೊದಲ ಮಳೆ ದಾವಣಗೆರೆ ತಾಲೂಕಿನ ಗುಮ್ಮನೂರು, ಆನಗೋಡು ಸೇರಿದಂತೆ ಹಲವೆಡೆ ಸುರಿದ ಆಲಿಕಲ್ಲು ಮಳೆಯಿಂದಾಗಿ ರಸ್ತೆಗಳೆಲ್ಲಾ ಬಿಳಿ ಬಣ್ಣಕ್ಕೆ ತಿರುಗಿದ್ದು, ನೋಡುಗರಿಗೆ ಜಮ್ಮು-ಕಾಶ್ಮೀರದ ಅನುಭವ ನೀಡುತ್ತಿತ್ತು. ಇತ್ತ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಸುಮಾರು ಒಂದು ಗಂಟೆ ಕಾಲ ನಿರಂತರ ಮಳೆ ಸುರಿದಿದ್ದು, ಮೈಸೂರಿಗರು ವರ್ಷದ ಮೊದಲ ಮಳೆಗೆ ಸಂಭ್ರಮ ವ್ಯಕ್ತಪಡಿಸಿದ್ದಾರೆ. ಚಾಮರಾಜನಗರ ಮತ್ತು ದಕ್ಷಿಣ ಕನ್ನಡದ ಕಡಬ ತಾಲೂಕಿನಲ್ಲೂ ಭಾರಿ ಬಿರುಗಾಳಿ ಸಹಿತ ಮಳೆಯಾಗಿದ್ದು, ಬಿಸಿಲ ಧಗೆಯಿಂದ ಬಸವಳಿದಿದ್ದವರಿಗೆ ಮಳೆರಾಯ ಸಮಾಧಾನ ತಂದಿದ್ದಾನೆ.

ಬೆಂಗಳೂರಿಗರಿಗೆ ಮೊದಲ ಮಳೆಯಲ್ಲೇ ಸಂಕಷ್ಟ ರಾಜಧಾನಿ ಬೆಂಗಳೂರಿನಲ್ಲಿ ಮಧ್ಯಾಹ್ನದ ನಂತರ ಹವಾಮಾನ ಬದಲಾಗಿ ಸಂಜೆ ವೇಳೆಗೆ ಅಬ್ಬರದ ಮಳೆ ಸುರಿಯಿತು. ಮೆಜೆಸ್ಟಿಕ್, ಜಯನಗರ, ಇಂದಿರಾನಗರ, ವಿಜಯನಗರ ಸೇರಿದಂತೆ ನಗರದ ಬಹುತೇಕ ಭಾಗಗಳಲ್ಲಿ ಆಲಿಕಲ್ಲು ಮಳೆಯಾಗಿದೆ. ಮಳೆಯಿಂದಾಗಿ ನಗರದ ಹಲವು ರಸ್ತೆಗಳು ಜಲಾವೃತವಾಗಿದ್ದು, ವಾಹನ ಸವಾರರು ಹೈರಾಣಾಗಿದ್ದಾರೆ. ಹೆಮ್ಮಿಗೆಪುರದಲ್ಲಿ ಅತಿ ಹೆಚ್ಚು ಅಂದರೆ 24 ಮಿಲಿ ಮೀಟರ್ ಮಳೆ ದಾಖಲಾಗಿದೆ. ಮುಂಬರುವ ಯುಗಾದಿ ಮತ್ತು ರಂಜಾನ್ ಸಾಲು ಸಾಲು ರಜೆಗಳ ಹಿನ್ನೆಲೆಯಲ್ಲಿ ಊರಿಗೆ ಹೊರಟಿದ್ದ ಜನರಿಗೆ ಮಳೆ ಮತ್ತು ಟ್ರಾಫಿಕ್ ಜಾಮ್ ದೊಡ್ಡ ಅಡ್ಡಿಯಾಗಿ ಪರಿಣಮಿಸಿತು. ಮೈಸೂರು ರಸ್ತೆಯ ನಾಯಂಡಹಳ್ಳಿವರೆಗೆ ಕಿಲೋಮೀಟರ್‌ಗಟ್ಟಲೆ ವಾಹನಗಳು ಸಾಲುಗಟ್ಟಿ ನಿಂತಿದ್ದವು.

ಮಾರ್ಚ್ 21ರವರೆಗೂ ಮುಂದುವರಿಯಲಿದೆ ಮುನ್ಸೂಚನೆ ಹವಾಮಾನ ಇಲಾಖೆಯ ವರದಿಯ ಪ್ರಕಾರ, ಪೂರ್ವ ಮುಂಗಾರು ಮಳೆ ಮುಂದಿನ ಎರಡು-ಮೂರು ದಿನಗಳ ಕಾಲ ಮುಂದುವರಿಯಲಿದೆ. ಮಾರ್ಚ್ 21ರವರೆಗೂ ಸಂಜೆ ವೇಳೆಗೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಹಗಲಿನಲ್ಲಿ ಒಣಹವೆ ಕಂಡುಬರಲಿದೆ. ಮಳೆಯ ಹಿನ್ನೆಲೆಯಲ್ಲಿ ನಗರದ ರಾಜಕಾಲುವೆ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಸೂಚನೆ ನೀಡಿದೆ. ಒಟ್ಟಾರೆಯಾಗಿ, ವರುಣನ ಆಗಮನದಿಂದ ಬಿಸಿಲು ಕಡಿಮೆಯಾಗಿದ್ದರೂ, ನಗರದ ಮೂಲಸೌಕರ್ಯಗಳ ಕೊರತೆಯಿಂದಾಗಿ ಬೆಂಗಳೂರಿಗರು ಮೊದಲ ಮಳೆಗೇ ಸಂಕಷ್ಟ ಎದುರಿಸುವಂತಾಗಿದೆ.